# Bangalore
# Regional News
# 30.07.2024 / 18.40 hrs

## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ರಾಜ್ಯದಲ್ಲಿ ಪ್ರವಾಹ ಪರಿಸ್ಥಿತಿ ಹಿನ್ನೆಲೆಯಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಕ್ಕೆ ಸಚಿವ ಕೃಷ್ಣ ಬೈರೇಗೌಡ ಸೂಚನೆ

೨. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಧಾರಾಕಾರ ಮಳೆ; ಅನೇಕ ಜಲಾಶಯಗಳು ಭರ್ತಿ

೩. ಮೈಶುಗರ್ ಸಕ್ಕರೆ ಕಾರ್ಖಾನೆ; ಕಬ್ಬು ಅರೆಯುವಿಕೆ ಆರಂಭ

೪. ಬಿಬಿಎಂಪಿ ವ್ಯಾಪ್ತಿಯಲ್ಲಿ ಅನಧಿಕೃತ ಫ್ಲೆಕ್ಸ್-ಬ್ಯಾನರ್‌ಗಳ ನಿಯಂತ್ರಣಕ್ಕೆ ಕಠಿಣ ಕ್ರಮ

೫. ಪ್ಯಾರಿಸ್ ಒಲಿಂಪಿಕ್ಸ್ : ೧೦ ಮೀಟರ್ ಏರ್ ಪಿಸ್ತೂಲ್ ಶೂಟಿಂಗ್ ಮಿಶ್ರ ವಿಭಾಗದಲ್ಲಿ ಭಾರತಕ್ಕೆ ಕಂಚು

<><*<><>*><>

ರಾಜ್ಯದಲ್ಲಿ ಮುಂಗಾರು ಜೂನ್-ಜುಲೈನಲ್ಲಿ ವಾಡಿಕೆಗಿಂತ ಶೇಕಡ ೨೬ರಷ್ಟು ಹೆಚ್ಚು ಮಳೆಯಾಗಿದೆ. ಆದರೆ ಕೋಲಾರ, ರಾಯಚೂರು, ಬಳ್ಳಾರಿ, ಕೊಪ್ಪಳ, ಬೆಂಗಳೂರು ಗ್ರಾಮಾಂತರದಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದೆ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಹೇಳಿದ್ದಾರೆ. ಪ್ರವಾಹಕ್ಕೆ ತುತ್ತಾದ ಮುಧೋಳದ ಯಾದವಾಡ ಸೇತುವೆಗೆ ಇಂದು ಭೇಟಿ ನೀಡಿ ಪರಿಶೀಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಲೆನಾಡು, ಕರಾವಳಿ, ಅರೆಮಲೆನಾಡಿನಲ್ಲಿ ಹೆಚ್ಚು ಮಳೆಯಾಗಿದೆ. ಘಟಪ್ರಭಾ ಮತ್ತು ಕೃಷ್ಣಾ ನದಿಯ ನೀರಿನ ಹರಿವು ಹೆಚ್ಚಾಗಿದ್ದು, ಇದರಿಂದ ಕೆಲವು ಗ್ರಾಮಗಳು, ಸೇತುವೆಗಳು ಮುಳುಗಡೆಯಾಗಿವೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಅತಿವೃಷ್ಟಿಗೆ ಒಟ್ಟು ೧ ಸಾವಿರದ ೨೫೭ ಗ್ರಾಮಗಳು ತುತ್ತಾಗಿವೆ. ಆದ್ದರಿಂದ ಟಾಸ್ಕ್‌ಫೋರ್ಸ್‌ಗಳನ್ನು ರಚನೆ ಮಾಡಲಾಗಿದೆ. ಸಂತ್ರಸ್ತರ ವಸತಿಗಾಗಿ ಆರೈಕೆ ಕೇಂದ್ರಗಳನ್ನು ತೆರೆಯಲಾಗಿದೆ. ರಾಜ್ಯದಲ್ಲಿ ಪ್ರಸ್ತುತ ೬೪ ಆರೈಕೆ ಕೇಂದ್ರಗಳನ್ನು ರಾಜ್ಯದಲ್ಲಿ ತೆರೆಯಲಾಗಿದ್ದು, ೧೦ ಸಾವಿರಕ್ಕೂ ಹೆಚ್ಚು ಜನರಿಗೆ ಊಟ, ವಸತಿ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ೮೩೨ ಮನೆಗಳಿಗೆ ಹಾನಿಯಾಗಿವೆ. ಅಂದಾಜಿನ ಪ್ರಕಾರ, ೪೪ ಸಾವಿರ ಹೆಕ್ಟರ್‌ನಷ್ಟು ಬೆಳೆ ಹಾನಿಯಾಗಿದೆ ಎಂಬ ಮಾಹಿತಿ ನೀಡಿದ್ದಾರೆ. ರಾಜ್ಯದಲ್ಲಿ ಪ್ರವಾಹ ಪರಿಸ್ಥಿತಿ ಎದುರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಕೃಷ್ಣಭೈರೇಗೌಡ ತಿಳಿಸಿದ್ದಾರೆ.

<><*<><>*><>

ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರದ ೧೦೦ನೇ ಸಭೆಯಲ್ಲಿ ನೀಡಿದ ಆದೇಶದಂತೆ. ಬಿಳಿಗುಂಡ್ಲುವಿನಲ್ಲಿ ಜುಲೈ ಅಂತ್ಯಕ್ಕೆ ನಿಗದಿಪಡಿಸಿದ ೪೦.೪೩ ಟಿಎಂಸಿಗಿಂತ ಹೆಚ್ಚುವರಿಯಾಗಿ ಜುಲೈ ೨೮ರಂತೆ ೩೬.೩೪ ಟಿಎಂಸಿ ನೀರು ಹರಿಬಿಡಲಾಗಿದೆ. ಒಟ್ಟಾರೆ, ಬಿಳಿಗುಂಡ್ಲುವಿನಲ್ಲಿ ನಿನ್ನೆಯವರೆಗೆ ೮೬.೧೭ ಟಿಎಂಸಿ ನೀರು ಹರಿಬಿಡಲಾಗಿದೆ. ಒಟ್ಟಾರೆ ನೀರಿನ ಮೊತ್ತವು ಆಗಸ್ಟ್ ಅಂತ್ಯದವರೆಗೆ ಬಿಡಬೇಕಾದ ನೀರಿನ ಪ್ರಮಾಣವನ್ನು ಭರಿಸಲಿದೆ. ಕಾವೇರಿ ನ್ಯಾಯಾಧೀಕರಣದ ಆದೇಶದಂತೆ ಮತ್ತು ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರದ ಮೊದಲನೇ ಸಭೆಯ ನಿರ್ಣಯದಂತೆ ಈ ಹೆಚ್ಚುವರಿ ನೀರಿನ ಪ್ರಮಾಣವನ್ನು ಮುಂಬರುವ ತಿಂಗಳಲ್ಲಿ ಕರ್ನಾಟಕವು ಹರಿಸಬೇಕಾದ ನೀರಿನ ಮೊತ್ತಕ್ಕೆ ಜಮೆ ಮಾಡಿಕೊಳ್ಳುವಂತೆ ಸಭೆಯಲ್ಲಿ ರಾಜ್ಯವು ಮನವಿ ಮಾಡಿದೆ. ಬಿಳಿಗುಂಡ್ಲುವಿನ ಹರಿವಿನಲ್ಲಿ ಯಾವುದೇ ಆತಂಕ ಇಲ್ಲದಿರುವುದರಿಂದ ಮತ್ತು ಹರಿವು ಸಾಮಾನ್ಯವಾಗಿರುವುದರಿಂದ ಸಮಿತಿಯ ಮುಂದಿನ ತಿಂಗಳ ಸಭೆಯಲ್ಲಿ ಹರಿವಿನ ಪರಿಸ್ಥಿತಿಯನ್ನು ಮತ್ತೊಮ್ಮೆ ಅವಲೋಕಿಸಲು ನಿರ್ಧರಿಸಲಾಯಿತು ಎಂದು ಪ್ರಕಟಣೆ ತಿಳಿಸಿದೆ.

<><*<><>*><>

ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲೂಕಿನ ಜಂಗಮಕೋಟೆ ಬಳಿ ೨ ಸಾವಿರದ ೮೭೩ ಎಕರೆ ಹಾಗೂ ಬಾಗೇಪಲ್ಲಿ ತಾಲೂಕಿನ ಕೊಂಡರೆಡ್ಡಿಪಲ್ಲಿ ಬಳಿ ೮೦೦ ಎಕರೆ ಭೂಮಿ ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು ೫ ಸಾವಿರಕ್ಕೂ ಹೆಚ್ಚು ಎಕರೆ ಭೂಮಿಯನ್ನು ಕೈಗಾರಿಕಾ ವಲಯಕ್ಕಾಗಿ ಗುರುತಿಸಲಾಗಿದ್ದು, ಈ ಪ್ರಕ್ರಿಯೆ ಅಂತಿಮ ಅಧಿಸೂಚನೆ ಹಂತದಲ್ಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಜಿಲ್ಲೆಯ ಚಿಂತಾಮಣಿ ತಾಲೂಕಿನ ವೈಜಕೂರು ಗ್ರಾಮದಲ್ಲಿ ಸಾಮೂಹಿಕ ಹಾಲು ಕರೆಯುವ ಯಂತ್ರಗಳ ಘಟಕ ಮತ್ತು ಸೋಲಾರ್ ಪ್ಯಾನಲ್ ಘಟಕವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ನಿರುದ್ಯೋಗಿ ಯುವ ಜನರಿಗೆ ಉದ್ಯೋಗಾವಕಾಶಗಳನ್ನು ಒದಗಿಸಬೇಕು ಹಾಗೂ ಜಿಲ್ಲೆಯ ಆರ್ಥಿಕ ಪರಿಸ್ಥಿತಿಯನ್ನು ಉತ್ತಮಪಡಿಸಬೇಕೆಂಬ ಉದ್ದೇಶದಿಂದ ಸರ್ಕಾರ ಕೈಗಾರಿಕೆಗಳನ್ನು ಸ್ಥಾಪಿಸಲು ಮುಂದಾಗಿದೆ ಎಂದರು. ನಂದಿನಿ ಹಾಲಿನ ಉತ್ಪನ್ನಗಳು ಉತ್ಕೃಷ್ಟ ಗುಣಮಟ್ಟವನ್ನು ಹೊಂದಿದ್ದು, ಚಿಂತಾಮಣಿಯಲ್ಲಿ ಸುಮಾರು ೬೦ ಕೋಟಿ ರೂಪಾಯಿ ವೆಚ್ಚದಲ್ಲಿ ೧೦ ಸಾವಿರ ಲೀಟರ್ ಸಾಮರ್ಥ್ಯದ ಐಸ್‌ಕ್ರೀಂ ಉತ್ಪಾದನಾ ಘಟಕವನ್ನು ಸ್ಥಾಪಿಸಲು ನಿರ್ಧರಿಸಲಾಗಿದೆ. ಅಲ್ಲದೇ ಶೀಘ್ರದಲ್ಲಿಯೇ ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರಿ ಹಾಲು ಒಕ್ಕೂಟ ಚಿಮುಲ್ ಅಸ್ತಿತ್ವಕ್ಕೆ ಬರಲಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಹಾಸನ ಜಿಲ್ಲೆಯಲ್ಲಿ ಧಾರಾಕಾರ ಮಳೆ ಸುರಿಯುತ್ತಿದ್ದು, ಇಂದು ಹೇಮಾವತಿ ಜಲಾಶಯದಿಂದ ಆರು ಕ್ರಸ್ಟ್‌ಗೇಟ್‌ಗಳ ಮೂಲಕ ೬೫ ಸಾವಿರ ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗಿದೆ. ಮಲೆನಾಡು ಭಾಗವಾದ ಸಕಲೇಶಪುರ ಹಾಗೂ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ಭಾಗದಲ್ಲೂ ಬಾರಿ ಮಳೆಯಾಗಿದೆ. ಇದರಿಂದ ಹೇಮಾವತಿ ನದಿಗೆ ಒಳಹರಿವು ಹೆಚ್ಚಳವಾಗಿದೆ. ಹೇಮಾವತಿ ಜಲಾಶಯದಿಂದ ಹೆಚ್ಚಿನ ಪ್ರಮಾಣದಲ್ಲಿ ನೀರು ಬಿಡುಗಡೆ ಮಾಡುವ ಹಿನ್ನೆಲೆಯಲ್ಲಿ ನದಿ ಪಾತ್ರದ ಜನರು ಎಚ್ಚರವಹಿಸುವಂತೆ ಜಿಲ್ಲಾಡಳಿತ ಸೂಚನೆ ನೀಡಿದೆ ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯಾದ್ಯಂತ ಧಾರಾಕಾರ ಮಳೆ ಮುಂದುವರೆದಿದ್ದು, ಜಿಲ್ಲೆಯಲ್ಲಿ ಎರಡು ದಿನಗಳ ಕಾಲ ರೆಡ್ ಅಲರ್ಟ್ ಘೋಷಿಸಲಾಗಿದೆ. ಕಾವೇರಿ ಮತ್ತು ಲಕ್ಷ್ಮಣತೀರ್ಥ ನದಿಗಳು ಪ್ರವಾಹೋಪಾದಿಯಲ್ಲಿ ಹರಿಯುತ್ತಿದ್ದು, ಗ್ರಾಮೀಣ ಭಾಗದ ಅನೇಕ ರಸ್ತೆಗಳಲ್ಲಿ ವಾಹನ ಸಂಚಾರ ಸ್ಥಗಿತಗೊಂಡಿದೆ. ಕಾವೇರಿ ನದಿ ಮೂರ್ನಾಡು ಬಳಿಯ ಬೇತ್ರಿ ಸೇತುವೆ ಬಳಿ ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು, ಮಡಿಕೇರಿ ಮತ್ತು ವಿರಾಜಪೇಟೆ ರಸ್ತೆ ಸಂಪರ್ಕ ಸ್ಥಗಿತಗೊಳ್ಳುವ ಸಾಧ್ಯತೆಯಿದೆ ಎಂದು ನಮ್ಮ ಕೊಡಗು ಪ್ರತಿನಿಧಿ ವರದಿ ಮಾಡಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ಭದ್ರಾ ನದಿಯು ಅಪಾಯದ ಮಟ್ಟ ಮೀರಿ ಹರಿಯುತ್ತಿದೆ. ಜಿಲ್ಲೆಯಲ್ಲಿ ಧಾರಾಕಾರ ಮಳೆಯಾಗುತ್ತಿದ್ದು, ತಗ್ಗು ಪ್ರದೇಶದ ಹಲವು ಮನೆ, ಅಂಗಡಿಗಳಿಗೆ ನೀರು ನುಗ್ಗಿದ್ದು, ಹಲವು ಕಟ್ಟಡಗಳು ಜಲಾವೃತಗೊಂಡಿವೆ. ಸ್ಥಳೀಯ ನಿವಾಸಿಗಳನ್ನು ದೋಣಿಗಳ ಮೂಲಕ ಬೇರೆಡೆಗೆ ಸ್ಥಳಾಂತರಿಸಲಾಗಿದೆ. ಭದ್ರಾ ನದಿಯ ಲಕ್ಕವಳ್ಳಿ ಜಲಾಶಯಕ್ಕೆ ಹೆಚ್ಚು ನೀರು ಹರಿದು ಬರುತ್ತಿದ್ದು, ಸುಮಾರು ೧೦ ಸಾವಿರ ಕ್ಯೂಸೆಕ್ ನೀರನ್ನು ಹೊರಬಿಡಲಾಗಿದೆ. ಜಲಾಶಯದ ಗರಿಷ್ಠ ಮಟ್ಟ ೧೮೬ ಅಡಿಗಳಾಗಿದ್ದು, ಇಂದಿನ ಮಟ್ಟ ೧೮೩ ಅಡಿ ಇದೆ. ೨೦ ಸಾವಿರದ ೭೭೪ ಕ್ಯೂಸೆಕ್ ಒಳಹರಿವು ಇದೆ.

**<><*<><>*><>**

ರಾಜ್ಯದ ಏಕೈಕ ಸರ್ಕಾರಿ ಸ್ವಾಮ್ಯದ ಮಂಡ್ಯ ಜಿಲ್ಲೆಯ ಮೈಶುಗರ್ ಸಕ್ಕರೆ ಕಾರ್ಖಾನೆಯ ಪ್ರಸಕ್ತ ಸಾಲಿನ ಕಬ್ಬು ಅರೆಯುವಿಕೆಗೆ ಸಕ್ಕರೆ ಸಚಿವ ಶಿವಾನಂದ ಪಾಟೀಲ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಚಾಲನೆ ನೀಡಿದ್ದಾರೆ. ಬಳಿಕ ಮಾತನಾಡಿದ ಸಚಿವ ಶಿವಾನಂದ ಪಾಟೀಲ, ಈ ಸಾಲಿನಲ್ಲಿ ೩ ಲಕ್ಷ ಟನ್ ಕಬ್ಬು ಅರೆಯುವ ಗುರಿ ಹೊಂದಲಾಗಿದೆ. ಜೊತೆಗೆ ಎಥನಾಲ್ ಘಟಕ ತೆರೆಯುವ ಬಗ್ಗೆಯೂ ಆಲೋಚನೆ ಮಾಡಲಾಗಿದೆ. ಈ ಬಾರಿ ಬರ ಪರಿಸ್ಥಿತಿ ಇಲ್ಲದ ಕಾರಣ ಕಬ್ಬು ಬೆಳೆಗೆ ಯಾವುದೇ ಸಮಸ್ಯೆ ಇಲ್ಲ ಹಾಗೂ ರೈತರ ಯಾವುದೇ ಬಾಕಿ ಹಣವನ್ನು ಸರ್ಕಾರ ಉಳಿಸಿಕೊಂಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಬೆಂಗಳೂರು ನಗರದಲ್ಲಿ ಬಿಬಿಎಂಪಿ ಹಾಗೂ ಪೊಲೀಸ್ ಇಲಾಖೆಯ ಜಂಟಿ ಕಾರ್ಯಾಚರಣೆಯ ಮೂಲಕ ಬೆಂಗಳೂರು ನಗರದಲ್ಲಿ ಅನಧಿಕೃತವಾಗಿ ಅಳವಡಿಸುವ ಫ್ಲೆಕ್ಸ್/ಬ್ಯಾನರ್ ಗಳ ನಿಯಂತ್ರಣಕ್ಕಾಗಿ ಪ್ರಮಾಣಿತ ಕಾರ್ಯಾಚರಣೆಯ ವಿಧಾನ-**SOP** ಹೊರಡಿಸಲಾಗುವುದೆಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದಾರೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಅಳವಡಿಸುತ್ತಿರುವ ಫ್ಲೆಕ್ಸ್, ಬ್ಯಾನರ್‌ಗಳ ನಿಯಂತ್ರಣಕ್ಕಾಗಿ ಆಯೋಜಿಸಲಾಗಿದ್ದ ಪಾಲಿಕೆ ಹಾಗೂ ಪೊಲೀಸ್ ಅಧಿಕಾರಿಗಳ ಸಭೆ ಉದ್ದೇಶಿಸಿ ಮಾತನಾಡಿದ ಅವರು, ನಗರದಲ್ಲಿ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡು ಅನಧಿಕೃತ ಜಾಹೀರಾತುಗಳು ಅಳವಡಿಸುವುದನ್ನು ಪರಣಾಮಕಾರಿಯಾಗಿ ನಿಯಂತ್ರಿಸುವಂತೆ ನಿರ್ದೇಶಿಸಿದರು.

**<><*<><>*><>**

ಬೆಳಗಾವಿ ಜಿಲ್ಲೆಯಲ್ಲಿ ಈ ವರ್ಷ ಉತ್ತಮ ಮಳೆಯಾಗಿದ್ದು, ಎಲ್ಲ ಜಲಾಶಯಗಳು ಭರ್ತಿಯಾಗಿವೆ. ಮುಂದಿನ ವರ್ಷದವರೆಗೆ ರೈತರ ಜಮೀನುಗಳಿಗೆ ಹಾಗೂ ಜನ-ಜಾನುವಾರುಗಳಿಗೆ ಕುಡಿಯುವ ನೀರು ಪೂರೈಕೆಗೆ ಯಾವುದೇ ತೊಂದರೆ ಇಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ. ಬೆಳಗಾವಿ ಜಿಲ್ಲೆಯಲ್ಲಿ ಇಂದು ನಡೆದ ಮಲಪ್ರಭಾ ಯೋಜನೆಯ ಪ್ರಸಕ್ತ ಸಾಲಿನ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ರೇಣುಕಾಸಾಗರ ಅಣೆಕಟ್ಟು ಪೂರ್ಣ ಭರ್ತಿಯಾಗುವ ಸಾಧ್ಯತೆಯಿದೆ. ಸಾಂಪ್ರದಾಯಿಕವಾಗಿ ಜಲಾಶಯಕ್ಕೆ ಬಾಗಿನ ಅರ್ಪಿಸಿ, ಆ ಭಾಗದ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ತ್ವರಿತವಾಗಿ ನೀರು ಬಿಡುಗಡೆಗೆ ಸೂಚಿಸಲಾಗುವುದು ಎಂದರು. ಗ್ರಾಮೀಣ ಕುಡಿಯುವ ನೀರಿನ ಯೋಜನೆಯಡಿ ನದಿ ಪಾತ್ರಗಳಲ್ಲಿ ಬರುವ ಗ್ರಾಮ ಹಾಗೂ ಪಟ್ಟಣಗಳಲ್ಲಿ ಈಗಾಗಲೇ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಜನ-ಜಾನುವಾರುಗಳಿಗೆ ಕುಡಿಯುವ ನೀರು ಕಲ್ಪಿಸುವ ಉದ್ದೇಶದಿಂದ ಮಲಪ್ರಭಾ ಎಡದಂಡೆಯ ಕೆರೆಗಳಲ್ಲಿ ನೀರು ತುಂಬಿಸಲಾಗಿದೆ ಎಂದು ಇದೇ ವೇಳೆ ನೀರಾವರಿ ಇಲಾಖೆ ಅಧಿಕಾರಿಗಳು ಸಚಿವರಿಗೆ ವಿವರಿಸಿದರು.

**<><*<><>*><>**

ಶಿವಮೊಗ್ಗ ಜಿಲ್ಲೆಯ ಭದ್ರ ಜಲಾಶಯದಿಂದ ಮಂಗಳವಾರ ಬೆಳಗ್ಗೆ ನಾಲ್ಕು ಕ್ರೆಸ್ಟ್ ಗೇಟ್‌ಗಳ ಮೂಲಕ ಭದ್ರಾ ನದಿಗೆ ನೀರು ಬಿಡುಗಡೆ ಮಾಡಲಾಗಿದೆ. ಭದ್ರಾ ಜಲಾಶಯದಲ್ಲಿ ೩೦ ಸಾವಿರ ಕ್ಯೂಸೆಕ್ ನೀರು ಒಳಹರಿವಿದ್ದು, ಇಂದು ೧೮೩.೩ ಕ್ಯೂಸೆಕ್ ನೀರು ಸಂಗ್ರಹವಾಗಿದ್ದರಿಂದ ಜಲಾಶಯ ಭರ್ತಿಯಾಗುವ ಹಂತಕ್ಕೆ ತಲುಪಿದೆ. ೧೮೬ ಅಡಿ ಸಾಮರ್ಥ್ಯದ ಜಲಾಶಯದಲ್ಲಿ ಒಳಹರಿವು ಹೆಚ್ಚಾದ ಪರಿಣಾಮ ಜಲಾಶಯದಿಂದ ಭದ್ರಾ ನದಿಗೆ ನೀರು ಹರಿಸಲಾಗುತ್ತಿದೆ.

**<><*<><>*><>**

ದೇಶದಲ್ಲಿ ಹಳೆಯ ಕ್ರಿಮಿನಲ್ ಕಾನೂನುಗಳನ್ನು ತೆಗೆದು ಹಾಕಲಾಗಿದೆ. ಹೊಸ ಕ್ರಿಮಿನಲ್ ಕಾನೂನುಗಳು ಜಾರಿಗೆ ಬಂದಿವೆ. ಹೊಸ ಕ್ರಿಮಿನಲ್ ಕಾನೂನುಗಳ ಬಗ್ಗೆ ಕಾನೂನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು ಎಂದು ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತ ಎನ್. ಶಶಿಕುಮಾರ್ ಹೇಳಿದ್ದಾರೆ. ಹುಬ್ಬಳ್ಳಿಯ ನವನಗರದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಕೇಂದ್ರ ಸಂವಹನ ಇಲಾಖೆ, ಧಾರವಾಡ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಧಾರವಾಡ  ಇವುಗಳ ಸಂಯುಕ್ತಾಶ್ರಯದಲ್ಲಿ ಹೊಸ ಕ್ರಿಮಿನಲ್ ಕಾನೂನುಗಳ ಕುರಿತ ವಿಶೇಷ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

**<><*<><>*><>**

ಬೆಳೆಯುತ್ತಿರುವ ಕೈಗಾರಿಕೆಗಳಿಗೆ ಪೂರಕವಾಗಿ ಕೈಗಾರಿಕಾ ತರಬೇತಿಯನ್ನು ಹೊಂದಿರುವರಿಗೆ ಉದ್ಯೋಗವಕಾಶಗಳು ಲಭ್ಯವಾಗಲಿದೆ. ಈ ನಿಟ್ಟಿನಲ್ಲಿ ಸರ್ಕಾರ, ಕೈಗಾರಿಕಾ ತರಬೇತಿ ಕೇಂದ್ರಗಳನ್ನು ಸ್ಥಾಪಿಸಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ್ ತಿಳಿಸಿದರು.

**<><*<><>*><>**

ಪ್ಯಾರೀಸ್ ಒಲಿಂಪಿಕ್ಸ್ ನ ೧೦ ಮೀಟರ್ ಏರ್ ಪಿಸ್ತೂಲ್ ಶೂಟಿಂಗ್ ಸ್ಪರ್ಧೆಯಲ್ಲಿ ಕಂಚಿನ ಪದಕ ಗೆದ್ದಿದ್ದ ಮನು ಭಾಕರ್, ಇಂದು ಮಿಶ್ರ ವಿಭಾಗದಲ್ಲಿ ಸರಬ್ಜೋತ್ ಸಿಂಗ್ ಜೊತೆಗೂಡಿ ಮತ್ತೊಂದು ಕಂಚಿನ ಪದಕ ಗೆದ್ದಿದ್ದಾರೆ. ಈ ಮೂಲಕ ಭಾರತದ ಒಲಿಂಪಿಕ್ ಪದಕಗಳ ಸಂಖ್ಯೆ ಎರಡಕ್ಕೇರಿದೆ. ಮೂರನೇ ಸ್ಥಾನಕ್ಕಾಗಿ ಇಂದು ನಡೆದ ಸ್ಪರ್ಧೆಯಲ್ಲಿ ರಿಪಬ್ಲಿಕ್ ಆಫ್ ಕೊರಿಯಾದ ಓಹ್ ಯೆ ಜಿನ್ ಮತ್ತು ಲೀ ವೊನ್ಹೋ ಅವರನ್ನು ಸೋಲಿಸಿ ಮನುಭಾಕರ್- ಸರಬ್ಜೋತ್ ಸಿಂಗ್ ಜೋಡಿ ಕಂಚಿನ ಪದಕ ಗೆದ್ದಿದ್ದಾರೆ. ರಾಷ್ಟ್ರಪತಿ ದ್ರೌಪದಿಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಮಂತ್ರಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಅನೇಕ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ. ಭಾರತದ ಬ್ಯಾಡ್ಮಿಂಟನ್ ತಾರೆ ಲಕ್ಷ್ಯ ಸೇನ್ ಪುರುಷರ ಸಿಂಗಲ್ಸ್ ಎಲ್ ಗುಂಪಿನ ಪಂದ್ಯದಲ್ಲಿ ನಾಳೆ ಹಾಲಿ ಏಷ್ಯನ್ ಚಾಂಪಿಯನ್ ಜೊನಾಟನ್ ಕ್ರಿಸ್ಟಿ ಅವರನ್ನು ಎದುರಿಸಲಿದ್ದಾರೆ. ಪುರುಷರ ಡಬಲ್ಸ್‌ನಲ್ಲಿ ಭಾರತದ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಕ್ವಾರ್ಟರ್‌ಫೈನಲ್‌ಗೆ ಅರ್ಹತೆ ಪಡೆದಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**